# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1117

ಸದಸ್ಯರ ಹೆಸರು : ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 15.12.2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅಧಿಕಾರಿಗಳ ನೇಮಕಾತಿ ಮತ್ತು ಗ್ರಾಮ ಪಂಚಾಯತಿ ಸಿಬ್ಬಂದಿ ನೇಮಕಾತಿ ಹಾಗೂ ಅನುಮೋದನೆಯ ನಿಯಮಗಳೇನು; ಅವುಗಳನ್ನು ಆಯಾಯ ಸಂದರ್ಭದಲ್ಲಿ ನಿಯಮಾನುಸಾರ ಪಾಲಿಸಲಾಗಿದೆಯೇ; ಪಾಲಿಸದಿರಲು ಕಾರಣವೇನು; (ವಿವರ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅಧಿಕಾರಿಗಳು ಮತ್ತು ನೌಕರರನ್ನು ಕರ್ನಾಟಕ ಸಾಮಾನ್ಯ ಸೇವೆ(ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಆಡಳಿತ ಶಾಖೆ) (ವೃಂದ ಮತ್ತು ನೇಮಕಾತಿ) ನಿಯಮಗಳು, 2008 ರನ್ವಯ ನೇಮಕಾತಿ ಮಾಡಿಕೊಳ್ಳಲಾಗುತ್ತದೆ.<br>ಗ್ರಾಮ ಪಂಚಾಯಿತಿ ನೌಕರರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು ನೇಮಕಾತಿ ವಿಧಾನ ಮತ್ತು ಇತರೆ ಸೇವಾ ಷರತ್ತುಗಳು) ನಿಯಮಗಳು, 2020ರಂತೆ ನೇಮಕಾತಿ ಮಾಡಲಾಗುತ್ತಿದೆ. |
| (ಆ) | ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ನೇಮಕಾತಿ ಮತ್ತು ಗ್ರಾಮ ಪಂಚಾಯಿತಿ ಸಿಬ್ಬಂದಿ ನೇಮಕಾತಿ ಹಾಗೂ ಅನುಮೋದನೆ ನ್ಯೂನತೆಗಳಿಂದಾಗಿ ಇಲಾಖೆಯಲ್ಲಿ ವಿವಿಧ ಹಂತದ ವಿವಿಧ ಶ್ರೇಣಿಯ ಅಧಿಕಾರಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಂದ ವಿವಿಧ ಹಂತದಲ್ಲಿ ಪ್ರತಿಭಟನೆಗಳು, ನ್ಯಾಯಾಲಯ ಪ್ರಕರಣಗಳು ದಾಖಲಾಗಿ ಒಟ್ಟು ಇಲಾಖಾ ಕಾರ್ಯಕ್ರಮಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಅಧಿಕಾರಿಗಳ ನೇಮಕಾತಿಯನ್ನು ಕರ್ನಾಟಕ ಲೋಕಸೇವಾ ಆಯೋಗ ಮುಖಾಂತರ ಮಾಡಲಾಗಿದೆ. ಗ್ರಾಮ ಪಂಚಾಯಿತಿ ಸಿಬ್ಬಂದಿ ನೇಮಕಾತಿ ಹಾಗೂ ಅನುಮೋದನೆಯು ಸರ್ಕಾರದ ದಿ:29/09/2020 ರ ನೇಮಕಾತಿ ನಿಯಮಗಳ ಪ್ರಕಾರ ಮಾಡಲಾಗುತ್ತಿದೆ. ಸದರಿ ನಿಯಮಗಳ ಪ್ರಕಾರ ಜಿಲ್ಲಾ ಹಂತದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಇರುವಂತಹ ಆಯ್ಕೆ ಸಮಿತಿಯು, ಆಯ್ಕೆ ಮಾಡಿ ನೇಮಕಾತಿ ಮಾಡಲು ಸಂಬಂಧ ಪಟ್ಟ ಗ್ರಾಮ ಪಂಚಾಯಿತಿಗೆ ಕಳುಹಿಸಬೇಕಾಗಿದೆ. ಗ್ರಾಮ ಪಂಚಾಯಿತಿ ಸಿಬ್ಬಂದಿಗಳ ಅನುಮೋದನೆಯು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993 ರ ಪ್ರಕರಣ 111, 112, 113 ರ ಪ್ರಕಾರ ಮತ್ತು ಅದರ ಅಡಿಯಲ್ಲಿ ವಿವಿದ ದಿನಾಂಕಗಳಂದು ಹೊರಡಿಸಿರುವ ಆದೇಶ ಹಾಗೂ ಸುತ್ತೋಲೆ ಪ್ರಕಾರ ನೀಡಲಾಗುತ್ತಿದೆ. |

| | | |
|---|---|---|
| (ಇ) | ಪಂಚಾಯತ್ ರಾಜ್ ಇಲಾಖೆಯಲ್ಲಿ ವಿವಿಧ ಹಂತದ ನೇಮಕಾತಿ ಪ್ರಕ್ರಿಯೆಯ ನೇಮಕಾತಿ ಅಧಿಸೂಚನೆ ರಾಜ್ಯಕ್ಕೆ ಒಂದೇ ಆಗಿದ್ದರೂ ಒಂದೇ ಜಿಲ್ಲೆಯಲ್ಲಿ ವಿವಿಧ ದಿನಾಂಕಗಳಂದು ಹಾಗೂ ಕೆಲವು ಜಿಲ್ಲೆಗಳಲ್ಲಿ ವಿವಿಧ ದಿನಾಂಕಗಳಂದು ನೇಮಕಾತಿ ಆದೇಶ ನೀಡಲು ಕಾರಣವೇನು; ಈ ಮೂಲಕ ಸೇವೆಗೆ ಸೇರಿದ ದಿನಾಂಕ ವ್ಯತ್ಯಾಸಕ್ಕೆ ಮತ್ತು ಇದರ ಮೂಲಕ ಸೇವಾ ಹಿರಿತನ ಹಾಗೂ ಬಡ್ತಿ ನಿರ್ಧರಿಸಲು ಸಾಧ್ಯವಾಗದ ಮೂಲ ಸಮಸ್ಯೆ ಸೃಷ್ಟಿಗೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮವೇನು; (ವಿವರ ನೀಡುವುದು) | 2009 ರಲ್ಲಿ ರಚಿಸಲಾದ ಇಲಾಖಾ ಸಮಿತಿಯು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯ ನೇಮಕಾತಿ ಪರೀಕ್ಷೆ ಜರುಗಿಸಲಾಗಿದೆ. ವಿವಿಧ ದಿನಾಂಕಗಳಂದು ನೇಮಕಾತಿ ಆದೇಶ ಪಡೆದ ಅಭ್ಯರ್ಥಿಗಳ ವಿಚಾರವು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತೆಗೆ ಸಂಬಂಧಿಸಿದ್ದಾಗಿರುತ್ತದೆ. ಈ ವಿಚಾರವು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಸಲ್ಲಿಸಲಾದ ರಿಟ್ ಅರ್ಜಿ ಸಂಖ್ಯೆ:4525/2021 ಹಾಗೂ ಸಂಗತ ರಿಟ್ ಅರ್ಜಿಗಳ ಮೇಲೆ ದಿನಾಂಕ 22.06.2023ರಂದು ನೀಡಿದ ಆದೇಶಕ್ಕೊಳಪಟ್ಟಿರುತ್ತದೆ. |
| (ಈ) | ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯತಿ ಸಿಬ್ಬಂದಿ ನೇಮಕಾತಿ ಹಾಗೂ ಅನುಮೋದನೆಯಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಹಾಗೂ ನ್ಯೂನತೆಗಳಿಂದಾಗ ಗ್ರಾಮ ಪಂಚಾಯತಿ ಸಿಬ್ಬಂದಿಗಳ ಕನಿಷ್ಠ ವೇತನ, ಬಡ್ತಿ ಹಾಗೂ ಇತರ ಸವಲತ್ತುಗಳ ಅಲಭ್ಯತೆಗೆ ಕಾರಣರಾದ ಅಧಿಕಾರಿಗಳ ಮೇಲೇ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | ಯಾವುದು ಇರುವುದಿಲ್ಲ. |

ಸಂಖ್ಯೆ: ಗ್ರಾಅಪ 642 ಗ್ರಾಪಂಅ 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.